ಅಪರ  ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ.   1157/2024

ಸಿ.ಡಬ್ಲ್ಯೂ  -01
ಪಿ.ಡಬ್ಲ್ಯೂ -01

ಸಾಕ್ಷಿದಾರನ ಹೆಸರು  :- ನಾರಾಯಣ
ತಂದೆಯ  ಹೆಸರು   :-  ರಂಗಯ್ಯ
ವಯಸ್ಸು  :-   50 ವರ್ಷ
ಉದ್ಯೋಗ  :- ವ್ಯವಸಾಯ
ವಾಸ  :-  ಚಿಕ್ಕಮಾವತ್ತೂರು

**ಸಾಕ್ಷಿಗೆ ದಿಃ 10.08.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ಆರೋಪಿತರು ನನಗೆ ಗೊತ್ತು. ನನಗೆ ಪ್ರಕರಣದ ಬಗ್ಗೆ ಏನು ಮಾಹಿತಿ ಇಲ್ಲ. ನಾನು ಆರೋಪಿಯ ವಿರುದ್ದ ದೂರನ್ನು ನೀಡಿರುತ್ತೇನೆ. ದೂರನ್ನು ನಿ.ಪಿ 1 ಎಂದು ಸಹಿ ನಿ.ಪಿ 1(ಎ) ಎಂದು ಗುರುತಿಸಲಾಯಿತು. ಸ್ಥಳ ಪಂಚನಾಮೆಗೆ ನನ್ನ ಸಹಿ ಇರುತ್ತದೆ ಅದನ್ನು ನಿ.ಪಿ 2 ಎಂದು ಸಹಿ ನಿ.ಪಿ 2(ಎ) ಎಂದು ಗುರುತಿಸಲಾಯಿತು. ಸ್ಥಳ ಪಂಚನಾಮೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಕ್ಷೆಗೆ ನನ್ನ ಸಹಿ ಇರುತ್ತದೆ ಅದನ್ನು ನಿ.ಪಿ 3 ಎಂದು ಸಹಿ ನಿ.ಪಿ 3(ಎ) ಎಂದು ಗುರುತಿಸಲಾಯಿತು. ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು  ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 17.11.2023 ರಂದು ಚಿಕ್ಕಮಾವತ್ತೂರು ಗ್ರಾಮದ ನಮ್ಮ ಮನೆಯಿಂದ ಚಾಸಾ 2 ಅವರನ್ನು ಆರೋಪಿ ಮದ್ಯಾಹ್ನ 2 ಗಂಟೆಯ ಸಮಯದಲ್ಲಿ ಚಾಸಾ 2 ಅವರನ್ನು ಅವರ ಜೊತೆ ಬರುವಂತೆ ಪುಸಲಾಯಿಸಿ ಕರೆದುಕೊಂಡು ಹೋಗಿರುತ್ತಾನೆ ಎಂದರೆ ಸರಿಯಲ್ಲ.

ದಿನಾಂಕ 19.11.2023 ರಂದು ಬೆಳಿಗ್ಗೆ 10 ರಿಂದ 11 ಗಂಟೆಯವರೆಗೆ ಪೋಲಿಸರು ನಾನು ತೋರಿಸಿದ ಸ್ಥಳದಲ್ಲಿ ಚಾಸಾ 3 ಮತ್ತು 4 ಅವರು ಸಮಕ್ಷಮ ಪಂಚನಾಮೆ ಯನ್ನು ಮಾಡಿ ನಕ್ಷೆಯನ್ನು ತಯಾರು ಮಾಡಿರುತ್ತಾರೆ ಎಂದರೆ ಸರಿಯಲ್ಲ. ದಿಃ 26.11.2023 ರಂದು ನಾನು ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ 4 ಎಂದು ಗುರುತಿಸಲಾಯಿತು. ನಾನು ಪ್ರಕರಣವನ್ನು ಆರೋಪಿತನೊಂದಿಗೆ ರಾಜಿ ಮಾಡಿಕೊಂಡಿರುತ್ತೇನೆ ಆದ ಕಾರಣ ಅವರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿತರ ವಕೀಲರು ಪಾಟೀ ಸವಾಲು ಇಲ್ಲವೆಂದು ನೀವೆದಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲಃ**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.